ಸಂಪುಟ: ೦೭/ ಸಂಚಿಕೆ: ೧೮೩/ ಬುಧವಾರ ದಿನಾಂಕ : ೧೦-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

■ ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ, ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 183/ WEDNESDAY Date : 10-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00



## ಉರ್ದು ಶಿಕ್ಷಕರ ನೇಮಕ: ಸಂಪುಟದಲ್ಲಿ ತೀರ್ಮಾನ

**ಬೆಂಗಳೂರು:** ಉರ್ದು ಹಿರಿಯ ಪ್ರಾಥಮಿಕ ಶಾಲೆಗಳ ಶಿಕ್ಷಕರ ನೇಮಕಾತಿ ಸಂಬಂಧ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ಕೈಗೊಳ್ಳುವುದಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಭರವಸೆ ನೀಡಿದ್ದಾರೆ.

ಸೋಮವಾರ ವಿಕಾಸಸೌಧದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಝುಮೀರ್ ಅಹ್ಮದ್ ಖಾನ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ, ಉರ್ದು ಶಿಕ್ಷಕರ ನೇಮಕಾತಿ ಸಂಬಂಧ ಎದುರಾಗಿರುವ ಸಮಸ್ಯೆ ನೀಗಿಸಿ ಅರ್ಹತೆ ಪಡೆದು ನೇಮಕಾತಿಗೆ ಕಾಯುತ್ತಿರುವ 67 ಅಭ್ಯರ್ಥಿಗಳ ತಕ್ಷಣ ನೇಮಕಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

755 ಉರ್ದು ಶಿಕ್ಷಕರ ಹುದ್ದೆಗೆ 2021–22ರಲ್ಲಿ ಆಯ್ಕೆ ಪ್ರಕ್ರಿಯೆ ನಡೆದು, ಉರ್ದು ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಹಿಂದುಳಿದ ವರ್ಗದ ಅಭ್ಯರ್ಥಿಗಳು ಇಲ್ಲದ ಕಾರಣ ಟಿಇಟಿ, ಸಿಇಟಿ ಪರೀಕ್ಷೆ ಬರೆದು ಉರ್ದು ಶಿಕ್ಷಕರ ಹುದ್ದೆಗೆ ಅರ್ಹತೆ ಪಡೆದ ಮುಸ್ಲಿಮ್ ಅಭ್ಯರ್ಥಿಗಳನ್ನು ಪರಿಗಣಿಸಲು ಮನವಿ ಮಾಡಲಾಗಿತ್ತು. ಇದಕ್ಕೆ ಕಾನೂನು ಇಲಾಖೆ, ಹಣಕಾಸು ಇಲಾಖೆ ಒಪ್ಪಿಗೆ ನೀಡಿತ್ತು. ಆದರೆ ತಾಂತ್ರಿಕ ಕಾರಣದಿಂದ ಸಮಸ್ಯೆಯಾಗಿತ್ತು. ಹೀಗಾಗಿ ಅಭ್ಯರ್ಥಿಗಳು ಸಚಿವ ಝುಮೀರ್ ಅಹ್ಮದ್ ಖಾನ್ ಹಾಗೂ ವಿಧಾನಪರಿಷತ್ ಸದಸ್ಯ ಅಬ್ದುಲ್ ಜಬ್ಬಾರ್ ಮೊರೆ ಹೋಗಿದ್ದರು.

# ಮದ್ದೂರು ಪ್ರಕರಣ

## ಜಾತಿ, ಧರ್ಮ, ಪಕ್ಷ ಲೆಕ್ಕಿಸದೆ ಕ್ರಮ



**ಬೆಂಗಳೂರು:** ಮದ್ದೂರಿನಲ್ಲಿ ಗಣೇಶ ವಿಸರ್ಜನೆ ಮೆರವಣಿಗೆ ವೇಳೆ ನಡೆದ ಕಲ್ಲು ತೂರಾಟ ಘಟನೆಗೆ ಕಾರಣರಾದವರ ವಿರುದ್ಧ ಯಾವುದೇ ಜಾತಿ, ಧರ್ಮ ಅಥವಾ ಪಕ್ಷವನ್ನು ಲೆಕ್ಕಿಸದೆ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಗಳವಾರ ಹೇಳಿದ್ದಾರೆ. ಅಲ್ಲದೆ ಬಿಜೆಪಿ "ಶಾಂತಿ ಕದಡಲು ಪ್ರಯತ್ನಿಸುತ್ತಿದೆ" ಎಂದು ಆರೋಪಿಸಿದ್ದಾರೆ.

ಸೆಪ್ಟೆಂಬರ್ 7 ರಂದು ನಡೆದ ಘಟನೆಯ ನಂತರ ಮದ್ದೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಉದ್ವಿಗ್ನತೆ ಹೆಚ್ಚಾಗಿದ್ದು, ಸೋಮವಾರ ಹಲವಾರು ಬಲಪಂಥೀಯ ಸಂಘಟನೆಗಳು ದೊಡ್ಡ ಪ್ರಮಾಣದ ಪ್ರತಿಭಟನೆ ನಡೆಸಿದವು. ಇಂದು ಮದ್ದೂರಿನಲ್ಲಿ ಬಿಜೆಪಿ ಬಂದ್‌ಗೆ ಕರೆ ನೀಡಿತ್ತು.

"ಅವರು(ಬಿಜೆಪಿ) ಮದ್ದೂರಿಗೆ ಹೋಗಲಿ. ಶಾಂತಿ ಕದಡುವುದೇ ಬಿಜೆಪಿಯ ಉದ್ದೇಶವಾಗಿದೆ. ಅಲ್ಲಿ ಅವರು ಬಂದ್‌ಗೆ ಕರೆ ನೀಡಿದ್ದಾರೆ. ನಾವು ಈಗಾಗಲೇ 21 ಜನರನ್ನು ಬಂಧಿಸಿದ್ದೇವೆ. ತಪ್ಪಿತಸ್ಥರ ವಿರುದ್ಧ ಯಾವುದೇ ಜಾತಿ, ಧರ್ಮವನ್ನು ಲೆಕ್ಕಿಸದೆ ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳುತ್ತಿದ್ದೇವೆ. ಅವರು ಬಿಜೆಪಿ ಅಥವಾ ಕಾಂಗ್ರೆಸ್‌ನವರಾಗಿರಲಿ, ಹಿಂದೂಗಳು, ಮುಸ್ಲಿಮರು ಅಥವಾ ಕ್ರಿಶ್ಚಿಯನ್ನರಾಗಿರಲಿ, ಕಠಿಣ ಕ್ರಮ ಕೈಗೊಳ್ಳಲಾಗುವುದು" ಎಂದು ಸಿದ್ದರಾಮಯ್ಯ ತಿಳಿಸಿದ್ದಾರೆ.

ಮಂಡ್ಯ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಈ ಹಿಂದೆ ಘಟನೆಗೆ ಸಂಬಂಧಿಸಿದಂತೆ 22 ಜನರನ್ನು ಬಂಧಿಸಲಾಗಿದೆ ಎಂದು ಹೇಳಿದ್ದರು.

ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ, ಮೈಸೂರಿನಲ್ಲಿ ಬಿಜೆಪಿ ಮತ್ತು ಇತರ ಬಲಪಂಥೀಯ ಸಂಘಟನೆಗಳು ನಡೆಸುತ್ತಿದ್ದ "ಚಾಮುಂಡಿ ಬೆಟ್ಟ ಚಲೋ" ಮೆರವಣಿಗೆಯನ್ನು ಪೊಲೀಸರು ತಡೆದಿದ್ದಾರೆ ಎಂಬುದನ್ನು ಗಮನಿಸಿದರು. "ಅವರು(ಬಿಜೆಪಿ) ಮೈಸೂರಿನಲ್ಲಿ ಚಾಮುಂಡಿ ಬೆಟ್ಟ (ಬೆಟ್ಟ) ಚಲೋವನ್ನು ಯೋಜಿಸಿದ್ದರು. ಆರ್ ಎಸ್ ಎಸ್ ಸಂಘಟನೆಯವರು ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಚಾಮರಾಜನಗರದವರು ಇದರಲ್ಲಿ ಪಾಲ್ಗೊಂಡು, ಶಾಂತಿ ಕದಡುವ ಕೆಲಸವನ್ನು ಮಾಡುತ್ತಾರೆಂಬ ಕಾರಣಕ್ಕೆ ಪೊಲೀಸರು ಚಾಮುಂಡಿ ಬೆಟ್ಟ ಚಲೋ ಗೆ ಅನುಮತಿ ನೀಡಲಿಲ್ಲ ಎಂದರು.

ಬಿಜೆಪಿಯವರು ರಾಜ್ಯದಲ್ಲಿ ಕಾನೂನು ವ್ಯವಸ್ಥೆ ಹದಗೆಟ್ಟಿರುವುದಾಗಿ ಕೇಂದ್ರ ಗೃಹ ಸಚಿವರಿಗೆ ದೂರು ನೀಡಿದ್ದಾರೆ ಎಂಬುದಕ್ಕೆ ಪ್ರತಿಕ್ರಿಯಿಸಿದ ಸಿಎಂ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆಯ ಜವಾಬ್ದಾರಿ ರಾಜ್ಯ ಸರ್ಕಾರದ್ದಾಗಿರುತ್ತದೆ ಎಂದರು. ಕೇಂದ್ರದಲ್ಲಿ ರೈತ ಚಳವಳಿಯಲ್ಲಿ ಅನೇಕ ರೈತರು ಪ್ರಾಣ ಕಳೆದುಕೊಂಡ ಸಂದರ್ಭದಲ್ಲಿ ಬಿಜೆಪಿಯವರು ಎಲ್ಲಿದ್ದರು.? ಮಣಿಪುರದಲ್ಲಿ ನಡೆದ ಹಿಂಸಾಚಾರದ ಬಗ್ಗೆ ಯಾವುದೇ ಬಿಜೆಪಿಯವರು ಧ್ವನಿ ಎತ್ತಲಿಲ್ಲವೇಕೆ ಎಂದು ಮರುಪ್ರಶ್ನಿಸಿದರು. ಮಣಿಪುರದಲ್ಲಿ ಹಿಂಸಾಚಾರ ನಡೆದರೂ, ಪ್ರಧಾನಿಯವರು ಮಣಿಪುರಕ್ಕೆ ಭೇಟಿ ನೀಡಲೇ ಇಲ್ಲ ಎಂದರು.





### ಪ್ರವಾಹ ಪೀಡಿತ ಹಿಮಾಚಲಪ್ರದೇಶಕ್ಕೆ ಪ್ರಧಾನಿ ಮೋದಿ ಭೇಟಿ

## 1,500ಕೋಟಿ ನೆರವು ಘೋಷಣೆ

**ನವದೆಹಲಿ:** ಮಂಗಳವಾರ ಪ್ರವಾಹದಿಂದ ತತ್ತರಿಸಿರುವ ಹಿಮಾಚಲ ಪ್ರದೇಶಕ್ಕೆ ಭೇಟಿ ನೀಡಿದ ಪ್ರಧಾನಿ ನರೇಂದ್ರ ಮೋದಿ, ರಾಜ್ಯಕ್ಕೆ ? 1,500 ಕೋಟಿ ಆರ್ಥಿಕ ನೆರವು ಘೋಷಿಸಿದರು. ಕಾಂಗ್ರಾದಲ್ಲಿ ಪ್ರವಾಹ ಮತ್ತು ಭೂಕುಸಿತ ಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆಯನ್ನು ಮಂಗಳವಾರ ಪ್ರಧಾನಿ ನರೇಂದ್ರ ಮೋದಿ ನಡೆಸಿದರು. ಕಾಂಗ್ರಾದಲ್ಲಿ ಪ್ರವಾಹ ಮತ್ತು ಭೂಕುಸಿತ ಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆಯನ್ನು ಮಂಗಳವಾರ ಪ್ರಧಾನಿ ನರೇಂದ್ರ ಮೋದಿ ನಡೆಸಿದರು.

ಇಡೀ ಪ್ರದೇಶ ಮತ್ತು ಜನರನ್ನು ಮತ್ತೆ ಸ್ಥಿತಿಗೆ ತರಲು ಬಹು ಆಯಾಮದ ದೃಷ್ಟಿಕೋನವನ್ನು ತೆಗೆದುಕೊಳ್ಳಬೇಕೆಂದು ಪ್ರಧಾನಿ ಕೇಳಿದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮುಂದಿನ ಹಂತಗಳಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆಯ ಮೂಲಕ ಮನೆಗಳ ಪುನರ್ನಿರ್ಮಾಣ, ರಾಷ್ಟ್ರೀಯ ಹೆದ್ದಾರಿಗಳ ಪುನಃಸ್ಥಾಪನೆ, ಶಾಲೆಗಳ ಪುನರ್ನಿರ್ಮಾಣ, ಪ್ರಧಾನ ಮಂತ್ರಿ ರಾಷ್ಟ್ರೀಯ ಪರಿಹಾರ ನಿಧಿ ಅಥವಾ ಪಿಎಂಎನ್‌ಆರ್‌ಎಫ್ ಅಡಿಯಲ್ಲಿ ನಿಬಂಧನೆಗಳು ಮತ್ತು ಜಾನುವಾರುಗಳಿಗೆ ಕಿಟ್‌ಗಳನ್ನು ಬಿಡುಗಡೆ ಮಾಡುವುದು ಸೇರಿವೆ.

ಕೃಷಿ ಸಮುದಾಯವನ್ನು ಬೆಂಬಲಿಸುವ ನಿರ್ಣಾಯಕ ಅಗತ್ಯವನ್ನು ಗುರುತಿಸಿ, ಪ್ರಸ್ತುತ ವಿದ್ಯುತ್ ಸಂಪರ್ಕವಿಲ್ಲದ ರೈತರನ್ನು ಗುರಿಯಾಗಿಟ್ಟುಕೊಂಡು ಹೆಚ್ಚುವರಿ ಸಹಾಯವನ್ನು ಒದಗಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿಯಲ್ಲಿ, ಹಾನಿಗೊಳಗಾದ ಮನೆಗಳ ಜಿಯೋಟ್ಯಾಗಿಂಗ್ ಮಾಡಲಾಗುವುದು. ಇದು ನಿಖರವಾದ ಹಾನಿಯ ಮೌಲ್ಯಮಾಪನ ಮತ್ತು ಸಹಾಯವನ್ನು ವೇಗವಾಗಿ ತಲುಪಿಸಲು ಸಹಾಯ ಮಾಡುತ್ತದೆ. ಪ್ರಧಾನಿ ಮೋದಿ ಪಂಜಾಬ್‌ಗೆ ಕೂಡ ಭೇಟಿ ನೀಡಲಿದ್ದಾರೆ.

## ತಪ್ಪಿತಸ್ಥರನ್ನು ರಕ್ಷಿಸುವ ಪ್ರಶ್ನೆಯೇ ಇಲ್ಲ

**ತುಮಕೂರು :** ಮಂಡ್ಯ ಜಿಲ್ಲೆ ಮದ್ದೂರಿನಲ್ಲಿ ಗಣೇಶಮೂರ್ತಿ ವಿಸರ್ಜನಾ ಮೆರವಣಿಗೆ ವೇಳೆ ನಡೆದ ಗಲಾಟೆಗೆ ಯಾರು ಕಾರಣಕರ್ತರಾಗಿದ್ದಾರೋ, ಯಾರು ತಪ್ಪಿತಸ್ಥರಿದ್ದಾರೋ ಅವರನ್ನು ಯಾವುದೇ ಕಾರಣಕ್ಕೂ ರಕ್ಷಣೆ ಮಾಡುವ ಪ್ರಶ್ನೆಯೇ ಇಲ್ಲ. ಅವರ ವಿರುದ್ಧ ಮುಲಾಜಿಲ್ಲದೆ ಕಾನೂನು ಕ್ರಮ ಕೈಗೊಳ್ಳುತ್ತೇವೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮದ್ದೂರು ಗಲಾಟೆಗೆ ಹಿಂದೂಗಳಿರಬಹುದು ಅಥವಾ ಮುಸಲ್ಮಾನ ರಾಗಿರಬಹುದು ಯಾರೇ ಕಾರಣರಾಗಿದ್ದರೂ ಅವರನ್ನು ರಕ್ಷಣೆ ಮಾಡಲು ಹೋಗುವುದಿಲ್ಲ. ಯಾರು ತಪ್ಪು ಮಾಡಿದ್ದಾರೋ ಅವರ ವಿರುದ್ಧ ಮುಲಾಜಿಲ್ಲದೆ ಶಿಸ್ತಿನ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಪುನುರಚ್ಚರಿಸಿದರು.

ಈಗಾಗಲೇ ಪೊಲೀಸರು ಸಿಸಿಟಿವಿ, ವಿಡಿಯೋಗಳ ದೃಶ್ಯಗಳನ್ನು ಪರಿಶೀಲನೆ ನಡೆಸಿದ್ದು, ಯಾರು ಯಾರು ಈ ಗಲಭೆಯಲ್ಲಿ ಭಾಗಿಯಾಗಿದ್ದರೆ, ಗಲಾಟೆ ಮಾಡಿದ್ದಾರೆ ಎಂಬುದನ್ನು ಪತ್ತೆ ಹಚ್ಚುವ ಕೆಲಸ ಮಾಡುತ್ತಿದ್ದಾರೆ. ಈಗಾಗಲೇ 15 ಮಂದಿಯನ್ನು ಬಂಧಿಸಿದ್ದು, ತಲೆಮರೆಸಿಕೊಂಡಿರುವ ಉಳಿದವರ ಪತ್ತೆ ಕಾರ್ಯದಲ್ಲಿ ತೊಡಗಿದ್ದಾರೆ. ಇಡೀ ರಾಜ್ಯದಲ್ಲಿ ಗಣೋಶೋತ್ಸವಗಳು ಶಾಂತಿಯುತವಾಗಿ ನಡೆಯುತ್ತಿದ್ದ ಸಂದರ್ಭದಲ್ಲಿ ಒಂದು ಊರಿನಲ್ಲಿ ಈ ರೀತಿಯ ಗಲಾಟೆ ನಡೆದಿದೆ ಎಂದರೆ ಏನರ್ಥ, ಈ ಗಲಾಟೆಗೆ ಪ್ರಚೋದನೆ ನೀಡಿದವರು, ಭಾಗಿಯಾದವರನ್ನು ಯಾವುದೇ ಕಾರಣಕ್ಕೂ ಸುಮ್ಮನೆ ಬಿಡುವ ಪ್ರಶ್ನೆಯೇ ಇಲ್ಲ ಎಂದು ಅವರು ಸ್ಪಷ್ಟಪಡಿಸಿದರು.



ಗಣೇಶೋತ್ಸವದ ಸಂದರ್ಭದಲ್ಲಿ ಪೊಲೀಸರ ಭದ್ರತೆ ಒಂದು ಕಡೆಯಾದರೆ ಜನರು ಸಹ ಶಾಂತಿಯಿಂದ ನಡೆದುಕೊಳ್ಳಬೇಕು. ಕಲ್ಲು ಎಸೆಯುವುದು, ಪ್ರಚೋದನೆ ಮಾಡುವುದು ಸರಿಯಲ್ಲ. ಈ ಗಲಾಟೆಯಲ್ಲಿ ಯಾರು ತಪ್ಪು ಮಾಡಿದ್ದಾರೋ ಅವರು ಶಿಕ್ಷೆ ಅನುಭವಿಸುತ್ತಾರೆ. ಇಂತಹ ಘಟನೆಗಳಿಂದ ಅನೇಕ ಬೆಳವಣಿಗೆಗಳಾಗುತ್ತವೆ. ಹಾಗಾಗಿ ಹೊರಗಡೆಯಿಂದ ಬಂದವರು ಈ ರೀತಿ ಗಲಾಟೆ ಮಾಡುವುದಾಗಲೀ, ಪ್ರಚೋದನೆ ಮಾಡುವ ಕೆಲಸವನ್ನಾಗಲೀ ಮಾಡಬಾರದು ಎಂದು ಅವರು ಹೇಳಿದರು. ಯಾರೂ ಸಹ ಕಾನೂನು ಕೈಗೆತ್ತಿಕೊಳ್ಳಲು ನಾವು ಅವಕಾಶ ಕೊಡುವುದಿಲ್ಲ ಎಂದ ಅವರು, ಒಂದು ವೇಳೆ ಈ ಗಲಾಟೆ ಪೂರ್ವನಿಯೋಜಿತ ಎನ್ನುವುದು ತನಿಖೆಯಿಂದ ಬೆಳಕಿಗೆ ಬಂದರೆ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಆಗುತ್ತದೆ ಎಂದರು. ಈ ವಿಚಾರದಲ್ಲಿ ಪೊಲೀಸರ ಭದ್ರತಾ ವೈಫಲ್ಯ ಎನ್ನುವುದು ಸರಿಯಲ್ಲ. ಪೊಲೀಸರು ಕಲ್ಲು ಹೊಡೆಯಿರಿ ಎಂದು ಹೇಳಿದ್ದರಾ, ಮೊದಲು ಯಾರು ತಪ್ಪು ಮಾಡಿದ್ದಾರೋ ಆ ಬಗ್ಗೆ ತನಿಖೆಯಾಗಲಿ. ಆ ನಂತರ ಭದ್ರತಾ ವೈಫಲ್ಯ ಆಗಿದೆಯೋ, ಇಲ್ಲವೋ ಎನ್ನುವ ಬಗ್ಗೆ ಗಮನ ಹರಿಸುತ್ತೇವೆ ಎಂದು ಹೇಳಿದರು. ಒಟ್ಟಾರೆ ಶಾಂತಿ ಸೌಹಾರ್ದತೆಯಿಂದ ಬದುಕು ನಡೆಸಲು ಎಲ್ಲರೂ ಸಹಕರಿಸಬೇಕು. ಇಂತಹ ಪ್ರಚೋದನಾಕಾರಿಗಳಿಗೆ ಆಸ್ಪದ ನೀಡಬಾರದು ಎಂದರು.

## ಕರ್ನಾಟಕ ಸರ್ಕಾರದ ಮಾಡೆಲ್ ಇಡೀ ದೇಶಕ್ಕೆ ಮಾದರಿ

**ಬೆಳಗಾವಿ:** ಪೂರ್ವ ಪ್ರಾಥಮಿಕ ತರಗತಿಗಳನ್ನು ಆರಂಭಿಸಿರುವ ಕರ್ನಾಟಕ ಸರ್ಕಾರದ ಮಾಡೆಲ್ (ಮಾದರಿ) ಅನ್ನು ಕೇಂದ್ರ ಸರ್ಕಾರವೂ ಅನುಸರಿಸುತ್ತಿದ್ದು, ಕರ್ನಾಟಕ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕೆಲಸಗಳ ಕುರಿತು ಕೇಂದ್ರ ಸರ್ಕಾರ ಶ್ಲಾಘನೆ ವ್ಯಕ್ತಪಡಿಸಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ. ಸುವರ್ಣ ಸೌಧದಲ್ಲಿ ಬೆಳಗಾವಿ ವಿಭಾಗೀಯ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ಇಲಾಖೆ ಸುಧಾರಣೆ ಬಗ್ಗೆ ಚರ್ಚೆ ನಡೆಸಲಾಯಿತು.

ನಮ್ಮದು ಜೀವನಮಟ್ಟ ಸುಧಾರಣೆ ಮಾಡುವ ಇಲಾಖೆಯಾಗಿದೆ ಎಂದರು. ಮಕ್ಕಳ ವಿದ್ಯಾಭ್ಯಾಸ, ಪೌಷ್ಠಿಕಾಂಶ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಹಾಗೂ ವಿವಿಧ ಯೋಜನೆಗಳ ಬಗ್ಗೆ ಚರ್ಚೆ ನಡೆಸಲಾಯಿತು. ಜೊತೆಗೆ ನಮ್ಮ ಸರ್ಕಾರ ಮಹಾತ್ವಾಕಾಂಕ್ಷಿ ಗೃಹಲಕ್ಷ್ಮೀ ಯೋಜನೆಯೂ ಫಲಾನುಭವಿಗಳಿಗೆ ತಲುಪುತ್ತಿರುವ ಬಗ್ಗೆ, ಸಾಮಾಜಿಕ ಪೀಡುಗಾಗಿರುವ ಬಾಲ್ಯ ವಿವಾಹ ನಿರ್ಮೂಲನೆ, ಪೋಕ್ಸೋ ಪ್ರಕರಣಗಳು ಸೇರಿದಂತೆ ವಿಕಲಚೇತನರಿಗೆ ಸಂಬಂಧಪಟ್ಟ ಯೋಜನೆಗಳ ಬಗ್ಗೆ ಚರ್ಚೆ ನಡೆಸಲಾಯಿತು ಎಂದು ಸಚಿವರು ವಿವರಿಸಿದರು.

ಬಳಿಕ ಹಂತ ಹಂತವಾಗಿ ವಿಸ್ತರಿಸಲಾಗುವುದು ಎಂದು ಹೇಳಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಪೊಲೀಸ್ ಇಲಾಖೆಯ ಸಹಯೋಗದಲ್ಲಿ ಅಕ್ಕಾ ಪಡೆ ಕಾರ್ಯನಿರ್ವಹಿಸಲಿದೆ. ಎನ್‌ಸಿಸಿ ವಿದ್ಯಾರ್ಥಿಗಳು, ಮಹಿಳಾ ಪೇದೆಗಳು ಜನನಿಬೀಡ ಪ್ರದೇಶಗಳು ಹಾಗೂ ಮಹಿಳಾ ಕಾಲೇಜುಗಳ ಬಳಿ ಕಾರ್ಯನಿರ್ವಹಿಸಲಿವೆ. ಇದಕ್ಕಾಗಿ 109 ಸಹಾಯವಾಣಿ ಆರಂಭಿಸಲಾಗಿದೆ ಎಂದರು. ದೇಶದಲ್ಲೇ ಪ್ರಥಮ ಬಾರಿಗೆ ದೇವದಾಸಿ ಸಮೀಕ್ಷೆ, ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆಗಳು ನಡೆಯುತ್ತಿದ್ದು, ಕಳೆದ ಮುಂಗಾರು ಅಧಿವೇಶನದಲ್ಲಿ ಬಾಲ್ಯವಿವಾಹ ನಿಷೇಧ ಕಾಯ್ದೆಯನ್ನು (ತಿದ್ದುಪಡಿ) ಜಾರಿಗೆ ತರಲಾಗಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಸರ್ಕಾರವಿದ್ದರೂ ನಮ್ಮ ಇಲಾಖೆಗೆ ಹೆಚ್ಚು ಅನುದಾನವನ್ನು ತಂದಿರುವೆ. ನಮ್ಮ ಇಲಾಖೆಯ ಕಾರ್ಯವೈಖರಿಗೆ ಕೇಂದ್ರ ಸರ್ಕಾರವೇ ಮೆಚ್ಚುಗೆ ವ್ಯಕ್ತಪಡಿಸಿದೆ ಎಂದರು.



### ನವೆಂಬರ್ 19ಕ್ಕೆ ಅಕ್ಕಾ ಪಡೆಗೆ ಚಾಲನೆ

ಕರ್ನಾಟಕದಲ್ಲಿ ಅಂಗನವಾಡಿ ಕೇಂದ್ರಗಳು ಆರಂಭಗೊಂಡು ಮುಂದಿನ ತಿಂಗಳಿಗೆ 50 ವರ್ಷ ಪೂರೈಸುತ್ತಿರುವ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ನವೆಂಬರ್ 19ರಂದು ಸುವರ್ಣ ಮಹೋತ್ಸವ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ ಎಂದು ಹೇಳಿದರು. ನವೆಂಬರ್ 19ರಂದು ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಅಂದೇ ಅಂಗನವಾಡಿ ಸುವರ್ಣ ಮಹೋತ್ಸವ ಸಮಾರಂಭ ನಡೆಸಲು ಉದ್ದೇಶಿಸಿದ್ದು, ಅಂದೇ ಅಕ್ಕಾ ಪಡೆಗೆ ಚಾಲನೆ ನೀಡಲಾಗುವುದು. ಪ್ರಾಯೋಗಿಕವಾಗಿ ಮೈಸೂರು, ಉಡುಪಿ, ಬೆಳಗಾವಿಯಲ್ಲಿ ಅಕ್ಕಾಪಡೆ ಜಾರಿಗೆ ಬರಲಿದೆ ಎಂದು ಸಚಿವರು ವಿವರಿಸಿದರು. ಈಗಾಗಲೇ 200 ಅಂಗನವಾಡಿ ಕೇಂದ್ರಗಳಲ್ಲಿ ಪ್ರಾಯೋಗಿಕವಾಗಿ ಸರ್ಕಾರಿ ಮಾಂಟೆಸ್ಸರಿ ತರಗತಿಗಳು ಆರಂಭಗೊಂಡಿದ್ದು, ಸದ್ಯ ಮೊದಲ ಹಂತದಲ್ಲಿ ಐದು ಸಾವಿರ ಅಂಗನವಾಡಿ ಕೇಂದ್ರಗಳಲ್ಲಿ ಪೂರ್ವ ಪ್ರಾಥಮಿಕ ತರಗತಿಗಳು ಆರಂಭಗೊಳ್ಳಲಿವೆ.

## ಪಪ್ಪಿ ಚಿನ್ನದ ಖಜಾನೆ ಕಂಡು ಇಡಿ ಶಾಕ್

**ಚಳ್ಳಕೆರೆ:** ಆಕ್ಸಿಸ್ ಬ್ಯಾಂಕ್ ನಲ್ಲಿದ್ದ ಚಿನ್ನ ಕಂಡು ಇಡಿ ಅಧಿಕಾರಿಗಳೇ ಶಾಕ್ ಆಗಿದ್ದಾರೆ. ಈ ಬ್ಯಾಂಕ್?ನಲ್ಲಿ ಕೋಟಿ ಕೋಟಿ ಮೌಲ್ಯದ ಚಿನ್ನದ ಬಿಸ್ಕೆಟ್ ಪತ್ತೆಯಾಗಿವೆ ಎಂದು ಕೇಂದ್ರ ತನಿಖಾ ಸಂಸ್ಥೆ ತಿಳಿಸಿದೆ.

ಇದರಲ್ಲಿ ಒಟ್ಟು 21.43 ಕೆಜಿ ತೂಕದ 24 ಕ್ಯಾರೆಟ್ ಚಿನ್ನದ ಗಟ್ಟಿ, 10.98 ಕೆಜಿ ತೂಕದ 11 ಯೂನಿಟ್ ಚಿನ್ನ ಲೇಪಿತ ಬೆಳ್ಳಿ ಗಟ್ಟಿಗಳು ಮತ್ತು ಸುಮಾರು 1 ಕೆಜಿ ಚಿನ್ನದ ಆಭರಣಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಇಡಿ ತಿಳಿಸಿದೆ.

ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ(ಪಿಎಂಎಲ್‌ಎ) ನಿಬಂಧನೆಗಳ ಅಡಿಯಲ್ಲಿ ಈ ಚಿನ್ನದ ವಸ್ತುಗಳನ್ನು ಎಲ್ಲಿಂದ ವಶಪಡಿಸಿಕೊಂಡಿದೆ ಎಂಬುದನ್ನು ಏಜೆನ್ಸಿ ಹೇಳಿಲ್ಲ.

"ಈ ವಶಪಡಿಸಿಕೊಳ್ಳುವಿಕೆಯನ್ನು ಪರಿಗಣಿಸಿದ ನಂತರ, ಈ ಪ್ರಕರಣ ದಲ್ಲಿ ಅಪರಾಧದ ಆದಾಯದ ಸಂಚಿತ ವಶಪಡಿಸಿಕೊಳ್ಳುವಿಕೆಯು 100 ಕೋಟಿ ರೂ.ಗಳನ್ನು ಮೀರಿದೆ" ಎಂದು ಏಜೆನ್ಸಿ ತಿಳಿಸಿದೆ. ಕಿಂಗ್ 567, ರಾಜ 567, ಲಯನ್ 567, ಪ್ಲೇ 567, ಪ್ಲೇವಿನ್ 567, ಇತ್ಯಾದಿಗಳ ಹೆಸರಿನಲ್ಲಿ ಶಾಸಕರು ಹಲವಾರು ಆನ್‌ಲೈನ್ ಬೆಟ್ಟಿಂಗ್ ಸೈಟ್‌ಗಳನ್ನು "ನಡೆಸುತ್ತಿದ್ದಾರೆ" ಎಂದು ಇಡಿ ಆರೋಪಿಸಿದೆ.

### ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧಿಕಾರಿಗಳಿಗೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಎಚ್ಚರಿಕೆ

# ಅಂಗನವಾಡಿ ನೇಮಕದಲ್ಲಿ ಭ್ರಷ್ಟಾಚಾರ ಸಹಿಸಲ್ಲ

ಬೆಳಗಾವಿ: ಅಂಗನವಾಡಿ ಕಾರ್ಯಕರ್ತರು, ಸಹಾಯಕಿಯರ ನೇಮಕದಲ್ಲಿ ಒತ್ತಡ ಅಥವಾ ಭ್ರಷ್ಟಾಚಾರವನ್ನು ಸಹಿಸುವುದಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಗಂಭೀರ ಎಚ್ಚರಿಕೆ ನೀಡಿದ್ದಾರೆ.

ಬೆಳಗಾವಿಯಲ್ಲಿ ಮಂಗಳವಾರ ಇಲಾಖೆಯ ವಿಭಾಗಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು ಮೆರಿಟ್ ಆಧಾರದ ಮೇಲೆ ಅಂಗನವಾಡಿ ನೇಮಕ ನಡೆಯುತ್ತದೆ. ಇದರಲ್ಲಿ ನಾನು ಎಂದೂ ಹಸ್ತಕ್ಷೇಪ ಮಾಡುವುದಿಲ್ಲ. ಜೊತೆಗೆ ಯಾರ ಒತ್ತಡಕ್ಕೂ ಒಳಗಾಗುವುದು ಬೇಡ. ಅಲ್ಲದೆ ಒಂದು ರೂಪಾಯಿ ಕೂಡ ಭ್ರಷ್ಟಾಚಾರ ನಡೆಯುವುದನ್ನು ಸಹಿಸುವುದಿಲ್ಲ. ಹಾಗೇನಾದರೂ ಆದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು. ಸಂಪೂರ್ಣ ಪಾರದರ್ಶಕವಾಗಿ ನೇಮಕಾತಿ ನಡೆಸಿ ಎಂದು ಲಕ್ಷ್ಮೀ ಹೆಬ್ಬಾಳಕರ್ ಸೂಚಿಸಿದರು. ಅಂಗನವಾಡಿಗಳು ಆರಂಭವಾಗಿ 50 ವರ್ಷವಾಗಿದೆ. ಇಲಾಖೆಗೆ ಇತಿಹಾಸವಿದೆ.

ಈ ವರ್ಷ ಸುವರ್ಣ ಮಹೋತ್ಸವ ಆಚರಿಸಲು ತಯಾರಿ ನಡೆಸುತ್ತಿದ್ದೇವೆ. ಶೇ.80ರಷ್ಟು ಅಂಗನವಾಡಿಗಳು ಖಾಸಗಿ ನರ್ಸರಿಗಳಿಗಿಂತ ಚೆನ್ನಾಗಿ ನಡೆಯುತ್ತಿದೆ.



ಮಕ್ಕಳಿಗೆ ಎಲ್ಲ ಸೌಲಭ್ಯ ಕೊಡುತ್ತಿದ್ದೇವೆ. ಬೀದಿ ಬೀದಿಗಳಲ್ಲಿ ಹೋಗಿ. ಪ್ರಚಾರ ಮಾಡಿ. ಸಂಖ್ಯೆ ಕಡಿಮೆಯಾಗಲು ಬಿಡಬೇಡಿ. ಪಾಲಕರ ಮನವೊಲಿಸಿ. ಮಕ್ಕಳನ್ನು ಹೆಚ್ಚು ಆಕರ್ಷಿಸಿ ಎಂದು ಅಧಿಕಾರಿಗಳಿಗೆ ಕರೆ ನೀಡಿದರು. ಅಂಗನವಾಡಿ ಕಟ್ಟಡಗಳ ಬಾಡಿಗೆ, ಮಕ್ಕಳಿಗೆ ಹಂಚುವ ಮೊಟ್ಟೆಗಳಿಗೆ ಅನುದಾನ ಕೊರತೆ ಇಲ್ಲ. ಇವುಗಳನ್ನು ವಿಳಂಬವಿಲ್ಲದೆ ಪಾವತಿಸಿ. ಪ್ರತಿ ತಿಂಗಳು ಪರಿಶೀಲನೆ ನಡೆಸಿ ಕ್ರಮ ತೆಗೆದುಕೊಳ್ಳಿ. ಇಲಾಖೆಯ ಕೆಲಸಗಳು ಸುಗಮವಾಗಿ ನಡೆಯಬೇಕು. ಅಗತ್ಯ ಸುಧಾರಣೆಯಾಗಬೇಕು. ಯಾವುದೇ ನಿರ್ಲಕ್ಷ್ಯವನ್ನು ಸಹಿಸುವುದಿಲ್ಲ ಎಂದು ಸಚಿವರು ಹೇಳಿದರು. ಸಕ್ಷಮ ಯೋಜನೆಯಲ್ಲಿ ವಿಶೇಷ ಪ್ರಯತ್ನ ಮಾಡಿ ರಾಜ್ಯಕ್ಕೆ 17,500 ಅಂಗನವಾಡಿ ತರಲಾಗಿದೆ. ದೊಡ್ಡ ರಾಜ್ಯಗಳಿಗೂ ಸಿಗದಷ್ಟು ನಮಗೆ ಸಿಕ್ಕಿದೆ. ಕೇಂದ್ರ ಸರಕಾರ ಕರ್ನಾಟಕದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯನ್ನು ಬೇರೆ ರಾಜ್ಯಗಳಿಗೆ ಮಾದರಿಯಾಗಿ ಉದಾಹರಿಸುತ್ತಿದೆ. ಹಾಗಾಗಿ ಅದಕ್ಕೆ ತಕ್ಕಂತೆ ಕೆಲಸ ಮಾಡಿ ಎಂದು ಸಚಿವರು ಹೇಳಿದರು.

ಸಭೆಯಲ್ಲಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ.ಶಾಮ್ಲಾ ಇಕ್ಬಾಲ್, ಜಿಲ್ಲಾಧಿಕಾರಿ ಮೊಹಮದ್ ರೋಷನ್, ಜಿಲ್ಲಾ ಪಂಚಾಯತ್ ಸಿಇಒ ರಾಹುಲ್ ಶಿಂಧೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಭೀಮಾಶಂಕರ್ ಗುಡೇದ್, ಆಯುಕ್ತ ಗುಲಾಬರಾವ್ ಭೂಷಣ ಬೋರಸೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ನಿರ್ದೇಶಕರಾದ ಮಹೇಶ್ ಬಾಬು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ನಿರ್ದೇಶಕರಾದ ರಾಘವೇಂದ್ರ, ಇಲಾಖೆಯ ಜಂಟಿ ನಿರ್ದೇಶಕರು ಹಾಗೂ ಸಚಿವರ ವಿಶೇಷ ಕರ್ತವ್ಯಾಧಿಕಾರಿ ಬಿ.ಎಚ್.ನಿಶ್ಚಲ್, ಡಿಎಸ್‌ಪಿ ನಿರಂಜನ್ ರಾಜೇ ಅರಸ್, ಇಲಾಖೆಯ ಜಂಟಿ ನಿರ್ದೇಶಕರು, ಉಪ ನಿರ್ದೇಶಕರು, ಜಿಲ್ಲಾ ನಿರೂಪಣಾಧಿಕಾರಿಗಳು ಹಾಗೂ ಶಿಶು ಯೋಜನಾಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

## 9 ಜನ ಡ್ರಗ್ಸ್ ಪೆಡ್ಲರ್‌ಗಳ ಬಂಧನ

### 1.5 ಕೋಟಿ ಮೌಲ್ಯದ ಮಾದಕವಸ್ತು ವಶ

**ಬೆಂಗಳೂರು:** ಇಬ್ಬರು ವಿದೇಶಿ ಪ್ರಜೆಗಳು ಸೇರಿದಂತೆ ಒಂಬತ್ತು ಮಂದಿ ಡ್ರಗ್ಸ್ ಪೆಡ್ಲರ್‌ಗಳನ್ನು ಸಿಸಿಬಿ ಪೊಲೀಸರು ಬಂಧಿಸಿ 1.5 ಕೋಟಿ ರೂ. ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ. ಕುಮಾರಸ್ವಾಮಿ ಲೇಔಟ್, ಆವಲಹಳ್ಳಿ, ಅಮೃತಹಳ್ಳಿ, ಹೆಬ್ಬಗೋಡಿ, ಮೈಕೋಲೇಔಟ್ ಹಾಗೂ ರಾಮಮೂರ್ತಿನಗರ ಪೊಲೀಸ್ ಠಾಣಾ ವ್ಯಾಪ್ತಿಗಳಲ್ಲಿ ಮಾದಕವಸ್ತುಗಳನ್ನು ಮಾರಾಟ ಮಾಡಲಾಗುತ್ತಿದೆ ಎಂಬ ಮಾಹಿತಿ ಮೇರೆಗೆ ಕಾರ್ಯಾಚರಣೆ ಕೈಗೊಂಡು 506 ಗ್ರಾಂ ಎಂಡಿಎಂಎ ಕ್ರಿಸ್ಟಲ್, 50 ಎಲ್‌ಎಸ್‌ಡಿ ಸ್ಟ್ರಿಪ್ಸ್‌ಗಳು, 85 ಗ್ರಾಂ ಕೊಕೇನ್, 56 ಗ್ರಾಂ ಗಾಂಜಾವನ್ನು ಸಿಸಿಬಿ ಪೊಲೀಸರು ವಶಪಡಿಸಿಕೊಂಡಿದ್ದಾರೆ.

**ಕುಮಾರಸ್ವಾಮಿ ಲೌಔಟ್:** ಇಬ್ಬರು ಎಂಜಿನಿಯರಿಂಗ್ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಾ ಡ್ರಗ್‌ಪೆಡ್ಲಿಂಗ್‌ನಲ್ಲಿ ತೊಡಗಿ ಶಾಸ್ತ್ರಿನಗರದ ಬಳಿ ಪೊಲೀಸರಿಗೆ ಸಿಕ್ಕಿಬಿದ್ದಿದ್ದು, ಆರು ಲಕ್ಷ ರೂ. ಬೆಲೆಯ ಎಲ್‌ಎಸ್‌ಡಿ ಸ್ಟ್ರಿಪ್ಸ್‌ಗಳನ್ನು ಪೊಲೀಸರು ಜಪ್ತಿ ಮಾಡಿದ್ದಾರೆ.

**ಆವಲಹಳ್ಳಿ:** ಮೆಡಿಕಲ್ ವೀಸಾ ಪಡೆದು ಭಾರತಕ್ಕೆ ಬಂದು ನಂತರ ತನ್ನ ದೇಶಕ್ಕೆ ಹಿಂದಿರಗದೆ ಅಕ್ರಮವಾಗಿ ನಗರದಲ್ಲಿ ನೆಲೆಸಿ ಡ್ರಗ್‌ಪೆಡ್ಲಿಂಗ್‌ನಲ್ಲಿ ತೊಡಗಿದ್ದ ವಿದೇಶಿ ಮಹಿಳೆಯನ್ನು ಬಂಧಿಸಿ ಎರಡು ಲಕ್ಷ ರೂ. ಮೌಲ್ಯದ 22 ಗ್ರಾಂ ಕೊಕೈನ್ ವಶಪಡಿಸಿಕೊಂಡಿದ್ದಾರೆ. ಇದೇ ವ್ಯಾಪ್ತಿಯ ಮತ್ತೊಂದು ಪ್ರಕರಣದಲ್ಲಿ ಹೈಡ್ರೋಗಾಂಜಾ ಮಾರಾಟ ಮಾಡುತ್ತಿದ್ದ ಆರೋಪಿಯನ್ನು ಬಂಧಿಸಿ 28 ಲಕ್ಷ ರೂ. ಮೌಲ್ಯದ 56 ಗ್ರಾಂ ಹೈಡ್ರೋಗಾಂಜಾ ವಶಪಡಿಸಿಕೊಳ್ಳಲಾಗಿದೆ. **ಹೆಬ್ಬಗೋಡಿ:** ಕೇರಳ ರಾಜ್ಯದಿಂದ ಉದ್ಯೋಗ ಅರಸಿಕೊಂಡು ನಗರಕ್ಕೆ ಬಂದು ಮೊಬೈಲ್ ಸರ್ವಿಸ್ ಕೆಲಸ ಮಾಡಿಕೊಂಡು ಹೆಚ್ಚಿನ ಹಣ ಸಂಪಾದನೆಗಾಗಿ ಕಡಿಮೆ ಬೆಲೆಗೆ ಮಾದಕವಸ್ತು ಖರೀದಿ ಮಾಡಿ ಹೆಚ್ಚಿನ ಬೆಲೆಗೆ ನಗರದಲ್ಲಿ ಮಾರಾಟ ಮಾಡುತ್ತಿದ್ದ ಆರೋಪಿ ಪೊಲೀಸರ ಬಲೆಗೆ ಬಿದ್ದಿದ್ದು, ಆತನಿಂದ 15 ಲಕ್ಷ ರೂ. ಮೌಲ್ಯದ 110 ಗ್ರಾಂ ಎಂಡಿಎಂಎ ಕ್ರಿಸ್ಟಲ್ ಜಪ್ತಿ ಮಾಡಲಾಗಿದೆ.

ಮುದ್ನಾಳ ತಾಂಡದ ಗ್ರಾಮಸ್ಥರಿಗೆ ಕಂದಾಯ ಗ್ರಾಮದ 64 ಪಲಾನುಭವಿಗಳಿಗೆ ಇ ಸ್ವತಃ ಗ್ರಾಪಂ ಉತ್ತಾರೆ ವಿತರಣೆ

# ಸಿದ್ದರಾಮಯ್ಯ ಸರಕಾರ ಜನಪರ ಅಡಳಿತ ಕೊಟ್ಟಿದೆ

**ಮುದ್ದೇಬಿಹಾಳ:** ಸಿದ್ದರಾಮಯ್ಯ ಸರಕಾರ ಜನಪರ ಅಡಳಿತ ಕೊಟ್ಟಿದೆ ಗ್ಯಾರಂಟಿ ಯೋಜನೆಗಳಾದ ಶಕ್ತಿ, ಗ್ರಹ ಲಕ್ಷ್ಮಿ ಯೋಜನೆ, ಗ್ರಹ ಜ್ಯೋತಿ, ಯುವ ನಿದಿ ಯೋಜನೆ ನಮ್ಮ ಸರಕಾರ ಕೊಡಲಾಗಿದೆ ಈ ಎಲ್ಲಾ ಯೋಜನೆಯಿಂದ ಬಡವರಿಗೆ ಬಡ ಮಹಿಳೆಯರಿಗೆ ಗ್ಯಾರಂಟಿ 2 ಸಾವಿರ ಯಿಂದ ಅನುಕೂಲವಾಗಿದೆ.ಗ್ಯಾರಂಟಿ ಯೋಜನೆ ಬಗ್ಗೆ ಬಿಜೆಪಿ ಪಕ್ಷದವರು ಸುಳ್ಳು ಆರೋಪಗಳನ್ನು ಮಾಡುವುದನ್ನು ನಿಲ್ಲಿಸಬೇಕು ಎಂದು ಶಾಸಕ ಹಾಗೂ ಕೆಎಸ್ಡಿ ನಿಗಮದ ಅಧ್ಯಕ್ಷ ಸಿ ಎಸ್ ನಾಡಗೌಡ ಹೇಳಿದರು.


ಮುದ್ದೇಬಿಹಾಳ ತಾಲ್ಲೂಕಿನ ಹಡಲಗೇರಿ ಗ್ರಾಪಂ ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳಲ್ಲಿ ಮುದ್ನಾಳ, ತಾಂಡಾ, ಹರಿಂದ್ರಾಳ, ಗೆದ್ದಲಮರಿ, ತಾಂಡಾ ಜನ ಸಂಪರ್ಕ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿ,

ಸಭೆಯಲ್ಲಿ ಮುದ್ನಾಳ ತಾಂಡದ ಗ್ರಾಮಸ್ಥರಿಗೆ ಕಂದಾಯ ಗ್ರಾಮದ 64 ಪಲಾನುಭವಿಗಳಿಗೆ ಇ ಸ್ವತಃ ,ಗ್ರಾಪಂ ಉತ್ತಾರೆಯನ್ನು ಶಾಸಕರು ವಿತರಣೆ ಮಾಡಿದರು.

ಹಿಂದಿನ ಬಿಜೆಪಿ ಸರಕಾರ ಎಸ್ ಸಿ ಪಿ ಟಿಎಸ್ಪಿ ಯೋಜನೆಗಳನ್ನು ಸಿಸಿ ರಸ್ತೆಗೆ ಕಾಮಗಾರಿ ಅನುದಾನವನ್ನು ಬಳಕೆ ಮಾಡಿದ್ದರಿಂದ ಸುಮಾರು 120 ಸಾವಿರ ಕೋಟಿ ಅನುದಾನದಲ್ಲಿ ಈಗಾಗಲೇ ಇನ್ನೂ 42 ಸಾವಿರ ಕೋಟಿ ಬಾಕಿ ಸಾಲವನ್ನು ನಮ್ಮ ಎಲ್ಲಾ ಅನುದಾನ ನಮ್ಮ

ಕಾಂಗ್ರೆಸ್ ಸರಕಾರ ಮುಟ್ಟಿಸಿಬೇಕು ಇದರಿಂದ ಅನುದಾನ ಬಂದ ಮೇಲೆ ಸಿಸಿ ರಸ್ತೆಯನ್ನು ಸರಿಪಡಿಸುತ್ತೇವೆ.

ಮುದ್ನಾಳ ಗ್ರಾಮಕ್ಕೆ ಕುಡಿಯುವ ಕುಡಿಯುವ ನೀರು ಸಿಸಿ ರಸ್ತೆ ಆಶ್ರಯ ಮನೆ ಬೀದಿ ದ್ವೀಪ ಶೌಚಾಲಯ ಶಾಸಕರ




ಮುಂದೆ ಗ್ರಾಮಸ್ಥರು ಸಮಸ್ಯೆಗಳನ್ನು ಸಮುದಾಯ ಭವನ ಬೇಡಿಕೆ ರಸ್ತೆ ಗ್ರಾಮಕ್ಕೆ ಸ್ಮಶಾನ ಸಮಸ್ಯೆ ಇದೆ ತಿಳಿಸಿದರು. ದೇವಸ್ಥಾನ ಗುಡಿ ಆರಾಧನೆ ಯೋಜನೆ ಕೆಲಸ ಅನುದಾನ ಕೊಡಬೇಕು. ಬಸ್ ದರ ಕಡಿಮೆ ಮಾಡಬೇಕು, ಬಸ್ ಸರಿಯಾಗಿ ಸಮಯಕ್ಕೆ ಬರುವುದಿಲ್ಲ ಬಸ್ ದರವನ್ನು ಕಡಿಮೆ ಮಾಡಬೇಕು ಇದಕ್ಕೆ ಶಾಸಕರು ಡಿಪೋ ಮ್ಯಾನೇಜರ್ ದೂರವಾಣಿ ಮೂಲಕ ಗ್ರಾಮಸ್ಥರು ಬೇಡಿಕೆಯನ್ನು ಶಾಸಕರು ಈಡೇರಿಸಿದರು ಹೇಳಿದರು.

ಒಂದು ವಾರದಲ್ಲಿ ಕುಡಿಯುವ ನೀರಿನ, ಶಾಲೆಯಲ್ಲಿ ಸ್ವಚ್ಚತಾ ಬಗ್ಗೆ ಊರಿನ ಶಾಲೆಯಲ್ಲಿ ಸ್ವಚ್ಚತಾ ಊರಿನ ಕಾಳಜಿ ನಿಮ್ಮ ಕೈಯಲ್ಲಿ ಇದೆ. ಸರಿಯಾಗಿ ನೋಡಿಕೊಳ್ಳಬೇಕು ನಾಗರಿಕರು ನಿಮ್ಮ ಶಿಕ್ಷಣ ವಂತರಾಗಬೇಕು ಶಾಸಕ ಸಲಹೆ ನೀಡಿದರು.

ಗ್ರಾಮದಲ್ಲಿ ಗ್ರಾಪಂ ಕುಡಿಯುವ ನೀರು ಬಹಳ ತೊಂದರೆ ಇದರ ಬಗ್ಗೆ ಕಾಳಜಿ ವಹಿಸಬೇಕು.ಒಂದು ಎಕರೆ ಸ್ಮಶಾನ ಕೊಟ್ಟಿದ್ದೇವೆ ಕಂದಾಯ ಇಲಾಖೆ ನಿರೀಕ್ಷಕ ಡಿ ಎಸ್ ತಳವಾರ ಸಭೆಯಲ್ಲಿ ತಿಳಿಸಿದರು. ತಾಲ್ಲೂಕು ಮಟ್ಟದಲ್ಲಿ ವಿವಿಧ ಅಧಿಕಾರಿಗಳು ಸಮಸ್ಯೆಗಳನ್ನು ಸರ್ಕಾರದ ಯೋಜನೆಗಳನ್ನು ನಾಗರಿಕಗೆ ಮುಟ್ಟಿಸಲು ಶಾಸಕರು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ತಾಲ್ಲೂಕು ಅಧ್ಯಕ್ಷ ಗುರು ತಾರನಾಳ, ತಾಪಂ ಯೋಜನಾ ನಿರ್ದೇಶಕ ಖುಬಾಸಿಂಗ್ ಜಾದವ್,ಬಿಇಓ ಬಿ ಎಸ್ ಸಾವಳಗಿ,ಕೃಷಿ ಅಧಿಕಾರಿ ಎಸ್ ಡಿ ಬಾವಿಕಟ್ಟಿ, ಸಿಡಿಪಿಓ ಶಿವಮೂರ್ತಿ ಕುಂಬಾರ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಎಂ ಎಂ ಬೆಳಗಲ್ಲ, ಶಿವಾನಂದ ಮೇಟಿ,ಗ್ರಾಪಂ ಸದಸ್ಯರು ವಿವಿಧ ಅಧಿಕಾರಗಳು, ಅಂಗನವಾಡಿ, ಶಾ ಕಾರ್ಯಕರ್ತರು, ಗ್ರಾಪಂ ಸಿಬ್ಬಂದಿಗಳು, ಸೇರಿದಂತೆ ಉಪಸ್ಥಿತರಿದ್ದರು.

# ಕಿತ್ತೂರ ಸಂಸ್ಥಾನದ ಸಮರ್ಪಕ ಅಧ್ಯಯನದ ಅಗತ್ಯವಿದೆ

**ರಾಮದುರ್ಗ:** ಕಿತ್ತೂರ ಸಂಸ್ಥಾನದ ಹೋರಾಟ ಹಾಗೂ ಸಂಸ್ಥಾನದ ದಾಖಲೆಗಳ ಬಗ್ಗೆ ಸಮರ್ಪಕ ಅಧ್ಯಯನದ ಅಗತ್ಯವಿದೆ. 1824ರ ಕಿತ್ತೂರಿನ ಹೋರಾಟದ ಬಗ್ಗೆ ಹೆಚ್ಚಿನ ಪ್ರಾಶಸ್ತ್ಯಗಳನ್ನು ನೀಡಬೇಕೆಂದು ಪ್ರಾಧ್ಯಾಪಕ ಡಾ. ಎ.ಬಿ.ವಗ್ಗರ ಹೇಳಿದರು.

ಸ್ಥಳೀಯ ವಿದ್ಯಾ ಪ್ರಸಾರಕ ಸಮಿತಿಯ ಸಿ.ಎಸ್.ಬೆಂಬಳಗಿ ಮಹಾವಿದ್ಯಾಲಯದಲ್ಲಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಮತ್ತು ರಾಣಿ ಚೆನ್ನಮ್ಮ ಅಧ್ಯಯನಪೀಠ ಹಾಗೂ ಇತಿಹಾಸ ವಿಭಾಗದ ವತಿಯಿಂದ ಕಿತ್ತೂರು ಹೋರಾಟದ ಪುನರ್ ಅವಲೋಕನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ರಾಣಿ ಚೆನ್ನಮ್ಮ ಅಧ್ಯಯನ ಪೀಠದ ನಿರ್ದೇಶಕಿ ಡಾ. ನಾಗರತ್ನ ಪರಾಂಡೆ ಅವರು ಕಿತ್ತೂರು ಹೋರಾಟದ ಮಹತ್ವ ಹಾಗೂ ರಾಣಿ ಚೆನ್ನಮ್ಮಳ ವ್ಯಕ್ತಿತ್ವದ ಕುರಿತು ಮಾತನಾಡಿದರು.

ವಿದ್ಯಾ ಪ್ರಸಾರಕ ಸಮಿತಿಯ ಅಧ್ಯಕ್ಷ ಎಸ್.ಎಸ್.ಸುಲ್ತಾಪೂರ ಕಾರ್ಯಕ್ರಮ ಉದ್ಘಾಟಿಸಿ ಕಿತ್ತೂರು ರಾಣಿ ಚೆನ್ನಮ್ಮಳ ಸಾಧನೆಯ ಬಗ್ಗೆ ಮಾತನಾಡಿದರು. ರಾಣಿ ಚನ್ನಮ್ಮ ಅಧ್ಯಯನ ಪೀಠದ ಸಲಹಾ ಸಮಿತಿ ಸದಸ್ಯೆ ರಶ್ಮಿ ಸುತಗಟ್ಟಿ ಮಾತನಾಡಿ, ಕಿತ್ತೂರಿನ ಹೋರಾಟ ಹಾಗೂ ಕಿತ್ತೂರಿನ ಇತಿಹಾಸವನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕೆಂದು ತಿಳಿಸಿದರು.

ಪ್ರಾಚಾರ್ಯ ಡಾ. ಪಿ.ಬಿ.ತೆಗ್ಗಿನಹಳ್ಳಿ ಸ್ವಾಗತಿಸಿದರು. ಎಸ್.ಬಿ.ಆಲಗುಂಡಿ ಅತಿಥಿ ಪರಿಚಯ ಮಾಡಿದರು. ಮಂಜುಳಾ ಮೂಡ್ಲವರ ನಿರೂಪಿಸಿದರು. ಎ. ಡಿ. ಕಾಮತ್ ವಂದಿಸಿದರು.




ರಾಮದುರ್ಗ ಸಿ.ಎಸ್.ಬೆಂಬಳಗಿ ಮಹಾವಿದ್ಯಾಯದಲ್ಲಿ ನಡೆದ ಕಿತ್ತೂರು ಹೋರಾಟದ ಪುನರ್ ಅವಲೋಕನ ಕಾರ್ಯಕ್ರಮವನ್ನು ವಿದ್ಯಾ ಪ್ರಸಾರಕ ಸಮಿತಿಯ ಅಧ್ಯಕ್ಷ ಎಸ್.ಎಸ್.ಸುಲ್ತಾಪೂರ ಉದ್ಘಾಟಿಸಿದರು.

# ಪೆನ್ ವಿಚಾರಕ್ಕೆ ಜಗಳ: ಕಣ್ಣು ಗುಡ್ಡೆ ಒಡೆದ ವಿದ್ಯಾರ್ಥಿ

**ಮಹಾಲಿಂಗಪುರ:** ಪೆನ್ ವಿಷಯಕ್ಕೆ ವಿದ್ಯಾರ್ಥಿಗಳ ನಡುವೆ ಆರಂಭವಾಗಿ 1ನೇ ತರಗತಿ ವಿದ್ಯಾರ್ಥಿ 5ನೇ ತರಗತಿ ವಿದ್ಯಾರ್ಥಿ ಕಟ್ಟಿಗೆಯಿಂದ ಕಣ್ಣಿಗೆ ಇರಿದು ಕಣ್ಣು ಗುಡ್ಡೆ ಒಡೆದ ಘಟನೆ ಬಾಗಲಕೋಟ ಜಿಲ್ಲೆಯ ರಬಕವಿ-ಬನಹಟ್ಟಿ ತಾಲೂಕಿನ ಢವಳೇಶ್ವರ ಗ್ರಾಮದ ಮೊರಬ ತೋಟದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಸೆ.3ರಂದು ನಡೆದಿದೆ.

ಪೆನ್ ವಾಪಸ್ ಕೇಳಿದ ವಿಷಯಕ್ಕೆ ಸಂಬಂಧಿಸಿದಂತೆ 5ನೇ ತರಗತಿ ವಿದ್ಯಾರ್ಥಿ ಸಮರ್ಥ ಕುಮಾರ ಹಿರಟ್ಟಿ ಹಾಗೂ 1ನೇ ತರಗತಿ ವಿದ್ಯಾರ್ಥಿ ಭಿಮಪ್ಪ ಆನಂದ ಲೋಕುರೆ ನಡುವೆ ಜಗಳ ನಡೆದಿದೆ. ಆರಂಭದಲ್ಲಿ ವಾಗ್ವಾದ ರೂಪದಲ್ಲಿದ್ದ ಜಗಳ ಬಳಿಕ ವಿಕೋಪಕ್ಕೆ ತಿರುಗಿದ್ದು, ಸಿಟ್ಟಿಗೆದ್ದ 1ನೇ ತರಗತಿ ಬಾಲಕ ಭಿಮಪ್ಪ ಆನಂದ ಲೋಕುರೆ ಕಟ್ಟಿಗೆಯಿಂದ 5ನೇ ತರಗತಿ ಬಾಲಕ ಸಮರ್ಥ ಕುಮಾರ ಹಿರಟ್ಟಿ ಕಣ್ಣಿಗೆ ಕಟ್ಟಿಗೆಯಿಂದ ಬಲವಾಗಿ ಚುಚ್ಚಿದ್ದಾನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ



ಗಾಯಗೊಂಡ ಬಾಲಕನ ತಂದೆ ಕುಮಾರ ಹಿರಟ್ಟಿ ಸೆ.4ರಂದು ಶಾಲೆಯ ಮುಖ್ಯ ಶಿಕ್ಷಕಿ ಜಯಶ್ರೀ ನಡುವಿನಕೇರಿ ಮತ್ತು ಅತಿಥಿ ಶಿಕ್ಷಕಿ ಶಿಲ್ಪಾ ಅಂಬಿ ವಿರುದ್ದ ಮಹಾಲಿಂಗಪುರ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಎಸ್ಸೈ ಕಿರಣ ಸತ್ತಿಗೇರಿ ದೂರು ದಾಖಲಿಸಿಕೊಂಡಿದ್ದಾರೆ. ಅಲ್ಲದೇ ಎಫ್ಐಆರ್ ಸಮೇತ ಮುಧೋಳ ಬಿಇಒ ಹಾಗೂ ಜಮಖಂಡಿ ಎಸಿ ಅವರಿಗೆ ಮನವಿಯನ್ನೂ ಸಲ್ಲಿಸಿ ಸೂಕ್ತ ಕ್ರಮಕ್ಕೆ ಆಗ್ರಹಿಸಿದ್ದಾರೆ.

ಸದ್ಯ ಕಟ್ಟಿಗೆ ಇರಿತಕ್ಕೆ ಒಳಗಾಗಿರುವ ಬಾಲಕನನ್ನು ಅಥಣಿ ನಗರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಬಾಲಕನ ಬಲಗಣ್ಣಿಗೆ ಗಂಭಿರ ಪೆಟ್ಟಾಗಿರುವುದರಿಂದ ಚಿಕಿತ್ಸೆ ಮೂಲಕ ಆತನ ಕಣ್ಣ ಗುಡ್ಡೆಯನ್ನು ತೆಗೆಯಲಾಗಿದೆ ಎಂದು ತಿಳಿದು ಬಂದಿದೆ.

ಈ ಬಾಲಕರ ಸಣ್ಣ ಪುಟ್ಟ ಜಗಳಕ್ಕೆ ಸಂಬಂಧಿಸಿದಂತೆ ಈಗಾಗಲೇ ಮುಖ್ಯ ಶಿಕ್ಷಕಿ ಜಯಶ್ರೀ ನಡುವಿನಕೇರಿ ಹಾಗೂ ಅತಿಥಿ ಶಿಕ್ಷಕಿ ಶಿಲ್ಪಾ ಅಂಬಿಗೆ ಪೋಷಕರು ಮಾಹಿತಿ ನೀಡಿದ್ದರು. ಆದರೆ, ಶಿಕ್ಷಕರು ಇದನ್ನು ಗಂಭೀರವಾಗಿ ಪರಿಗಣಿಸದೆ, ಸ್ಥಳಕ್ಕೆ ಭೇಟಿ ನಿಡದೇ, ಯಾವುದೇ ಕ್ರಮಕ್ಕೆ ಕೂಡ ಮುಂದಾಗದೇ ನಿರ್ಲಕ್ಷ್ಯ ತೋರಿದ್ದೇ ಈ ಘಟನೆಗೆ ಕಾರಣ ಎಂದು ದೂರಲಾಗಿದೆ. ಕ್ಷುಲ್ಲಕ ಕಾರಣಕ್ಕೆ ಮಕ್ಕಳು ಮಾರಣಾಂತಿಕ ಹಲ್ಲೆಗೊಳಗಾಗಿದ್ದು ವಿಷಾದಕರ ಸಂಗತಿ. ಅದೃಷ್ಟವಶಾತ್ ಮಗು ಪ್ರಾಣಾಪಾಯದಿಂದ ಪಾರಾಗಿದೆಯಾದರೂ ಕಣ್ಣು ಕಳೆದುಕೊಳ್ಳುವ ಹಂತಕ್ಕೆ ಹೋಗಿದ್ದು ದುರದೃಷ್ಟಕರ ಎಂದು ಪಾಲಕರು ಮರುಗುತ್ತಿದ್ದಾರೆ.

# ಅರ್ಜಿ ಆಹ್ವಾನ

**ಗದಗ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳಿಗೆ (ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ ) ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ 2025-26 ನೇ ಸಾಲಿನಲ್ಲಿ ಆನ್ ಲೈನ್ ಮೂಲಕ https:shp.karnataka.gov.in/bcwd ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅಕ್ಟೋಬರ್ 4 ಕೊನೆಯ ದಿನವಾಗಿದೆ. ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಗದಗ ಕಚೇರಿ ದೂರವಾಣಿ ಸಂಖ್ಯೆ 08372-237414 ಸಂಪರ್ಕಿಸಬಹುದಾಗಿದೆ.

# ಡಾ. ಸತ್ಯನಾರಾಯಣರಿಗೆ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ

**ಬೆಳಗಾವಿ:** ಸಂಗೀತ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆಗೈದ ಡಾ.ಎಂ.ಎನ್. ಸತ್ಯ ನಾರಾಯಣ ಅವರಿಗೆ ಬೆಂಗಳೂರು ಗಾಂಧಿ ಭವನದಲ್ಲಿ ಪ್ರೆಸ್ ಕ್ಲಬ್ ವೆಲ್ಫೇರ್ ವರ್ಲ್ಡ್ ವೈಡ್ ಫೌಂಡೇಶನ್ ಅವರು ಆಯೋಜಿಸಿದ್ದ ಅಂತರಾಷ್ಟ್ರೀಯ ಸಾಮಾಜಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರೀಯ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಅಮೇರಿಕಾ ವಿಶ್ವವಿದ್ಯಾಲಯದಿಂದ ಸಾರ್ವಜನಿಕ ಆಡಳಿತ ಹಾಗೂ ಸಮಾಜ ಕಲ್ಯಾಣ ನಿರ್ವಹಣೆಯಲ್ಲಿ ಚಿನ್ನದ ಪದಕ ಪುರಸ್ಕೃತ ಡಾ. ರಾಜಕುಮಾರ್ ಭಾರದ್ವಾಜ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು ಅವರು ಮಾತನಾಡುತ್ತ 'ಹೊಸ ಹೊಸ ಸಾಹಿತಿ, ಕಲಾವಿದರನ್ನು ಗುರುತಿಸಿ ಪ್ರೋತ್ಸಾಹಿಸುತ್ತಿರುವ ಈ ಸಂಸ್ಥೆ ಕಾರ್ಯ ಶ್ಲಾಘನೀಯ' ಎಂದು ಹೇಳಿದರು.

ಮುಂದೆ ಮಾತನಾಡುತ್ತ ಡಾ. ಭಾರದ್ವಾಜ್ ಅವರು ಬೆಳಗಾವಿಯಲ್ಲಿ ಬ್ಯಾಂಕ್ ಅಧಿಕಾರಿಯಾಗಿ ಪ್ರಾಮಾಣಿಕ ಸೇವೆಯನ್ನು ಸಲ್ಲಿಸಿ ನಿವೃತ್ತಿ ಹೊಂದಿರುವ ಅಲ್ಲದೇ ನಾದಸುಧಾ ಸುಗಮ ಸಂಗೀತ ಶಾಲೆಯ ಸಂಸ್ಥಾಪಕರಾದ ಡಾ. ಎಂ. ಎನ್. ಸತ್ಯನಾರಾಯಣ




ಅವರು ಸಂಗೀತ ಸೇವೆಗಾಗಿಯೇ ತಮ್ಮ ಜೀವನವನ್ನು ಸಮರ್ಪಿಸಿಕೊಂಡವರು. ಯುವ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸಿ ರಾಜ್ಯ, ರಾಷ್ಟ್ರಮಟ್ಟದಲ್ಲಿ ಪರಿಚಯಿಸಿದ ಹಿರಿಮೆ ಸತ್ಯನಾರಾಯಣರದ್ದು. ಇವರ ಅಮೂಲ್ಯ ಸೇವೆಗಾಗಿ ಪ್ರೆಸ್ ಕ್ಲಬ್ ವೆಲ್ಫೇರ್ ವರ್ಲ್ಡ್‌ವೈಡ್ ಫೌಂಡೇಶನ್ ಸಂಸ್ಥೆಯಿಂದ ರಾಷ್ಟ್ರೀಯ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲು ನನಗೆ ಹೆಮ್ಮೆ ಅನ್ನಿಸುತ್ತದೆ ಎಂದು ಅವರು ಹೇಳಿದರು.

# ಐತಿಹಾಸಿಕ ಸ್ಮಾರಕಗಳ ರಕ್ಷಣೆಗೆ ಸೂಕ್ತ ಕ್ರಮ ಕೈಗೊಳ್ಳಬೇಕು

**ಕೊಪ್ಪಳ:** ಕೊಪ್ಪಳ ಜಿಲ್ಲೆಯು ಐತಿಹಾಸಿಕ ಪ್ರವಾಸಿ ತಾಣಗಳನ್ನು ಹೊಂದಿದ್ದು, ಜಿಲ್ಲೆಯ ಐತಿಹಾಸಿಕ ಸ್ಮಾರಕಗಳ ಗುರುತಿಸಬೇಕು ಹಾಗೂ ಅವುಗಳ ರಕ್ಷಣೆಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಸೋಮವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಹಮ್ಮಿಕೊಂಡಿದ್ದ ಕೊಪ್ಪಳ ಜಿಲ್ಲೆಯ ಐತಿಹಾಸಿಕ ಪ್ರವಾಸಿ ತಾಣಗಳ ಬಳಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಕೊಪ್ಪಳ ಜಿಲ್ಲೆಯ ಅಂಜನಾದ್ರಿ ಬೆಟ್ಟದಲ್ಲಿ ಮೊದಲನೇ ಹಂತದಲ್ಲಿ ಮಂಜೂರಾಗಿರುವ ಹಾಗೂ ಎರಡನೇ ಹಂತದಲ್ಲಿ ಅನುಮೋದನೆಯಾಗಿರುವ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು 93 ಎಕರೆ 15 ಗುಂಟೆ ಭೂಸ್ವಾಧೀನಪಡಿಸಿಕೊಳ್ಳಲು ಮರು ಪ್ರಸ್ತಾವನೆ ಸಲ್ಲಿಸಿ. ಅಂಜನಾದ್ರಿ ಬೆಟ್ಟದಲ್ಲಿ ಮೊದಲನೇ ಹಂತದಲ್ಲಿ ಮಂಜೂರಾಗಿರುವ ಹಾಗೂ ಎರಡನೇ ಹಂತದಲ್ಲಿ ಅನುಮೋದನೆಯಾಗಿರುವ ಅಂಜನಾದ್ರಿ ಬೆಟ್ಟದ ಮುಂದೆ ಥೀಮ್ ಆಧಾರಿತ ಮೆಟ್ಟಿಲುಗಳ ನಿರ್ಮಾಣ ಮತ್ತು ಬೆಟ್ಟದ ಹಿಂದುಗಡೆ ಥೀಮ್ ಆಧಾರಿತ ಮೆಟ್ಟಿಲುಗಳ ನಿರ್ಮಾಣ ಕಾಮಗಾರಿ, ಪ್ರದಕ್ಷಣಾ ಪಥ ಹಾಗೂ ರೋಪವೇ ಸೇರಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಅಗತ್ಯವಾಗಿರುವ ಅರಣ್ಯ ಪ್ರದೇಶದ ಜಮೀನಿಗೆ ಸಂಬಂಧಿಸಿದಂತೆ (Parivesh



2.0) ವೆಬ್‌ಸೈಟಿನಲ್ಲಿ ಅರ್ಜಿ ಸಲ್ಲಿಸಿ ನಿರಾಕ್ಷೇಪಣಾ ಪತ್ರ ಪಡೆಯುವ ನಿಟ್ಟಿನಲ್ಲಿ ಕಾಮಗಾರಿಗಳಿಗೆ ಅವಶ್ಯವಿರುವ ಒಟ್ಟು 7 ಎಕರೆ ಅರಣ್ಯ ಜಮೀನಿನ ನಿರಾಕ್ಷೇಪಣಾ ಪ್ರಮಾಣ ಪತ್ರ (NOC) ಪಡೆಯಲು ಕ್ರಮ ಕೈಗೊಳ್ಳಬೇಕು. ಅಂಜನಾದ್ರಿ ಬೆಟ್ಟದ ಶ್ರೀ ಆಂಜನೇಯಸ್ವಾಮಿ ದೇವಸ್ಥಾನ ಸಮಗ್ರ ಅಭಿವೃದ್ಧಿಗಾಗಿ ರೂ. 200 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳುತ್ತಿರುವ ಮೊದಲನೇ ಹಂತ ಹಾಗೂ ಎರಡನೇ ಹಂತದ ಕಾಮಗಾರಿಗಳು ಹಾಗೂ ರೋಪ್ ವೇ (ಪಿಪಿಪಿ ಮಾದರಿ) ಸೇರಿದಂತೆ ಹೆರಿಟೇಜ್ ಇಂಪ್ಯಾಕ್ಟ್ ಅಸೆಸ್ಮೆಂಟ್ ಸ್ಟಡಿ (Heritage Impact Assessment Study) ಅಂತಿಮ ವರದಿಯನ್ನು ತಯಾರಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೊಪ್ಪಳ ನಗರದ ಜವಾಹರ್ ರಸ್ತೆಯಲ್ಲಿರುವ ಹಳೆ ಎಸಿ ಕಛೇರಿ ಕಟ್ಟಡದಲ್ಲಿ ವಸ್ತು ಸಂಗ್ರಹಾಲಯ ಸ್ಥಾಪಿಸಲು ಹಾಗೂ ಕೊಪ್ಪಳ ಕೋಟೆಯ ಸಮಗ್ರ ಅಭಿವೃದ್ಧಿ ಕುರಿತು ಡಿಪಿಆರ್ ತಯಾರಿಸಬೇಕು. ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಗೆ ಒಳಪಟ್ಟಿರುವ ಅಶೋಕನ ಶಿಲಾಶಾಸನ (ಗವಿಮಠ ಪರಿಸರ) ಮತ್ತು ಅಶೋಕನ ಪಾಲ್ಕಿಗುಂಡು ಶಿಲಾಶಾಸನ, ಮಳೆಮಲ್ಲೇಶ್ವರ ದೇವಸ್ಥಾನದ ಬೆಟ್ಟದ ಮೇಲಿನ ಪ್ರಾಚೀನದಿನ್ನೆ, ಹಿರೇಬೆಣಕಲ್ ಗ್ರಾಮದ ಮೋರೆರ ಬೆಟ್ಟ ಹಾಗೂ ಇಟಗಿ ಗ್ರಾಮದ ಶ್ರೀ ಮಹಾದೇವ ದೇವಾಲಯ, ಈ 4 ಸ್ಮಾರಕಗಳ ಸಂರಕ್ಷಣೆ ಮತ್ತು ಅಭಿವೃದ್ಧಿ ಕಾಮಗಾರಿಗೆ ಸಂಬಂಧಿಸಿದಂತೆ ಅಂದಾಜು ಪಟ್ಟಿ ಸಲ್ಲಿಸಬೇಕು. ಕೊಪ್ಪಳದ ಹುಲಿಕೆರೆಯನ್ನು ಅಭಿವೃದ್ಧಿಪಡಿಸುವ ವಿಸ್ತುತ ಯೋಜನಾ ವರದಿ (ಡಿಪಿಆರ್) ಸಿದ್ದಪಡಿಸಿ ಸಲ್ಲಿಸಬೇಕು ಎಂದರು.

ಸ್ವದೇಶ್ ದರ್ಶನ್ 2.0 ಯೋಜನೆಯ ಟ್ರಾವೆಲರ್ ನೂಕ್ ರಾಯಲ್ ("Travellers Nook" Royal) ಕಾಮಗಾರಿಯನ್ನು ಕೈಗೊಳ್ಳಲು ಗಂಗಾವತಿ ತಾಲ್ಲೂಕಿನ ಆನೆಗುಂದಿ ಗ್ರಾಮದ ಸರ್ವೆ ನಂ: 17* ರಲ್ಲಿ 35 ಗುಂಟೆ ಜಮೀನನ್ನು ತರಬೇತಿ ಕೇಂದ್ರ ಹಾಗೂ ವಸತಿ ಉದ್ದೇಶಕ್ಕಾಗಿ ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕೊಪ್ಪಳ ರವರ ಹೆಸರಿನಲ್ಲಿ ಕಾಯ್ದಿರಿಸಲಾಗಿದ್ದು, ಈ ಜಮೀನನ್ನು ಪ್ರವಾಸೋದ್ಯಮ ಇಲಾಖೆಯ ಹೆಸರಿಗೆ ಹಸ್ತಾಂತರಿಸಬೇಕು. ಹಂಪಿ ವಿಶ್ವಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ ವ್ಯಾಪ್ತಿಯಲ್ಲಿನ 17 ಹಾಗೂ ಕನಕಗಿರಿ ವ್ಯಾಪ್ತಿಯಲ್ಲಿನ 3 ಸೇರಿ ಒಟ್ಟು 20 ಸ್ಮಾರಕಗಳನ್ನು ಗುರುತಿಸಲಾಗಿದ್ದು, ರಾಜ್ಯ ಸಂರಕ್ಷಿತ ಸ್ಮಾರಕಗಳೆಂದು ಘೋಷಣೆ ಮಾಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಆಯುಕ್ತರು ನಗರಸಭೆ, ಆಯುಕ್ತರು ನಗರಾಭಿವೃದ್ಧಿ ಪ್ರಾಧಿಕಾರ, ಆಯುಕ್ತರು ಹಂಪಿ ವಿಶ್ವ ಪರಂಪರೆ ನಿರ್ಮಾಣ ಪ್ರಾಧಿಕಾರ, ಕಮಲಾಪುರದಲ್ಲಿರುವ ಪುರಾತತ್ವ ಸಂಗ್ರಹಾಲಯ ಮತ್ತು ಪರಂಪರೆ ಇಲಾಖೆಯ ಉಪನಿರ್ದೇಶಕ ಡಾ. ಆರ್.ಶೇಜೇಶ್ವರ, ತಹಶಿಲ್ದಾರರು ಗಂಗಾವತಿ, ಸಹಾಯಕ ನಿರ್ದೇಶಕರು ಭೂ ದಾಖಲೆಗಳ ಇಲಾಖೆ ಗಂಗಾವತಿ, ಹೊಸಪೇಟೆಯ ಸೃಷ್ಟಿ ಆರ್ಕಿಟೆಕ್ಟ್ ಶ್ರೀಪಾದ, ಕೊಪ್ಪಳ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಸದಸ್ಯ ಕಾರ್ಯದರ್ಶಿ ಹಾಗೂ ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಡಿ.ನಾಗರಾಜ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ತಹಶಿಲ್ದಾರರು ಹಾಗೂ ಪ್ರವಾಸೋದ್ಯಮ ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.

# ನಾಳೆ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆ

**ಧಾರವಾಡ:** ಕರ್ನಾಟಕ ಅರಣ್ಯ ಇಲಾಖೆಯ ಧಾರವಾಡ ವೃತ್ತ ಮತ್ತು ಧಾರವಾಡ ವಿಭಾಗದ ಸಹಯೋಗದಲ್ಲಿ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯ ಅಂಗವಾಗಿ ನಾಡಿನ ಅರಣ್ಯ ಮತ್ತು ವನ್ಯ ಜೀವಿ ಸಂಪತ್ತನ್ನು ಸಂರಕ್ಷಿಸಲು ಪ್ರಾಣ ತ್ಯಾಗ ಮಾಡಿದ ಕರ್ನಾಟಕ ಅರಣ್ಯ ಹುತಾತ್ಮರಿಗೆ ಶ್ರದ್ಧಾಂಜಲಿ ಸಲ್ಲಿಸುವ ಕಾರ್ಯಕ್ರಮವನ್ನು ಸೆಪ್ಟೆಂಬರ 11, 2025 ರಂದು ಬೆಳಿಗ್ಗೆ 8:45 ಗಂಟೆಗೆ ಧಾರವಾಡ ಕೆ.ಸಿ.ಪಾರ್ಕ ಹತ್ತಿರದ ಅರಣ್ಯ ಸಂಕೀರ್ಣದಲ್ಲಿ ಆಯೋಜಿಸಲಾಗಿದೆ. ಧಾರವಾಡ ಜಿಲ್ಲಾ ಹಾಗೂ ಸತ್ರ ನ್ಯಾಯಾಲಯದ ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರಾದ ಬಿ.ಎಸ್.ಭಾರತಿ ಅವರು ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಧಾರವಾಡ ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಡಿ.ಯತೀಶ ಕುಮಾರ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಜಿಲ್ಲಾಧಿಕಾರಿ ದಿವ್ಯ ಪ್ರಭು ಸೇರಿದಂತೆ ಅನೇಕರು ಎಂದು ಅರಣ್ಯ ಇಲಾಖೆ ಪ್ರಕಟಣೆ ತಿಳಿಸಿದೆ.

# ಸರಳ ವಿವಾಹಕ್ಕಾಗಿ ಅರ್ಜಿ ಆಹ್ವಾನ

**ಬೆಳಗಾವಿ:** 2025-26ನೇ ಸಾಲಿಗೆ ಅಲ್ಪಸಂಖ್ಯಾತರ ಸಮುದಾಯದವರಿಂದ ಸರಳ ವಿವಾಹಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.2025-26ನೇ ಸಾಲಿಗೆ ಅಲ್ಪಸಂಖ್ಯಾತರಕಲ್ಯಾಣ ಇಲಾಖೆ ವತಿಯಿಂದ ಆರ್ಥಿಕವಾಗಿ ಹಿಂದುಳಿದ ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಹಾಗೂ ಪಾರ್ಸಿ) ಅಭ್ಯರ್ಥಿಗಳಿಂದ ಸರಳ ವಿವಾಹ ಪ್ರೋತ್ಸಾಹ ನೀಡಲು ಸ್ವಯಂ ಸಂಸ್ಥೆಗಳ ಮೂಲಕ ನಡೆಯುವ ಸಮೂಹ ವೆಚ್ಚಗಳಿಗಾಗಿ ಪ್ರತಿ ಜೋಡಿಗೆ ರೂ.50000/- ಗಳನ್ನು ನೀಡಲಾಗುವುದು. ಅರ್ಹ ಅಭ್ಯರ್ಥಿಗಳು ಜಿಲ್ಲಾ ನೋಂದಣಿ/ವಕ್ಫ ಬೋರ್ಡ ಕಛೇರಿಗಳಲ್ಲಿ ಸಾಮೂಹಿಕ ವಿವಾಹಗಳ ಆಯೋಜಕರೆಂದು ನೋಂದಣಿಯಾಗಿರುವ ಖಾಸಗಿ ಟ್ರಸ್ಟ್‌ಗಳು, ದೇವಸ್ಥಾನದ ಟ್ರಸ್ಟಗಳು, ಸಂಘಗಳು, ಸೊಸೈಟಿಗಳು, ವಕ್ಫ್ ಸಂಸ್ಥೆಗಳು ಮತ್ತು ಖಾಸಗಿ ವ್ಯಕ್ತಿಗಳು ನಡೆಸುವ ಸಾಮೂಹಿಕ ವಿವಾಹ ಕಾರ್ಯಕ್ರಮಗಳಲ್ಲಿ ವಿವಾಹವಾದಲ್ಲಿ ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

# ಶಿಬಿರದ ಶಿಸ್ತು ನಿತ್ಯದ ಕಾಯಕವಾಗಲಿ: ಭೂಮಣ್ಣವರ




**ಬಾಗಲಕೋಟೆ:** ಶಿಸ್ತು, ಸಂಯಮ, ಶ್ರಮದಾನ ಮತ್ತು ಯೋಗಾಭ್ಯಾಸ ಚಟುವಟಿಕೆಗಳು ಕೇವಲ ಶಿಬಿರಕ್ಕೆ ಸೀಮಿತವಾಗದೆ ದಿನನಿತ್ಯ ಜೀವನಕ್ಕೆ ಅಳವಡಿಸಿಕೊಳ್ಳಿ. ಉತ್ತಮ ಅಭ್ಯಾಸಗಳಿಂದ ವ್ಯಕ್ತಿತ್ವ ವಿಕಸಗೊಳ್ಳುತ್ತದೆ ಎಂದು ಎನ್.ಎಸ್.ಎಸ್ ಘಟಕದ ಬಾಗಲಕೋಟೆ ಜಿಲ್ಲಾ ನೋಡಲ್ ಅಧಿಕಾರಿಗಳಾದ ಡಾ.ಎಸ್.ಎಸ್ ಭೂಮಣ್ಣವರ ಹೇಳಿದರು.

ಬಸವೇಶ್ವರ ಕಲಾ ಮಹಾವಿದ್ಯಾಲಯದ ಎನ್.ಎಸ್.ಎಸ್ ಘಟಕದ ವತಿಯಿಂದ ಮುಚಖಂಡಿ ಗ್ರಾಮದಲ್ಲಿ ಹಮ್ಮಿಕೊಂಡ ಏಳು ದಿನದ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭವನ್ನು ಉದ್ದೇಶಿಸಿ ಅವರು ಮಾತನಾಡಿದರು. ಪ್ರಯತ್ನದಿಂದ ಸಾಧನೆ ಸಾಧ್ಯ ಆದರೆ ಅದಕ್ಕೆ ಗುರುವಿನ ಮಾರ್ಗದರ್ಶನ ಅವಶ್ಯಕ ಅಂತಹ ಸಾಧನೆಯ ಮಾರ್ಗವನ್ನು ವಿಶೇಷ ಶಿಬಿರಗಳು ನೀಡುವ ಕೆಲಸ ಮಾಡುತ್ತವೆ ಅದನ್ನು ಬಳಕೆ ಮಾಡಿಕೊಳ್ಳುವ ಕೆಲಸವನ್ನು ನಿಮ್ಮದಾಗಬೇಕು ಎಂದರು.

ಉತ್ತಮ ಹಂತಕ್ಕೆ ಬೆಳೆಯುವ ಮೂಲಕ ಗುರುಹಿರಿಯರಿಗೆ ತಲೆಬಾಗಿ ಬದುಕುವುದನ್ನು ರೂಡಿಸಿಕೊಳ್ಳಿ ಅದು ವ್ಯಕ್ತಿತ್ವದ ಸಂಕೇತವಾಗಿದೆ. ಎನ್.ಎಸ್.ಎಸ್ ಕೇವಲ ಶ್ರಮದಾನಕ್ಕೆ ಸೀಮಿತವಾಗಿರದೇ ರಾಜ್ಯ ಸರಕಾರ ಜಾರಿಗೆ ತರುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಎಂಬ ಹೊಸ ಯೋಜನೆಯಲ್ಲಿ ಎನ್.ಎಸ್.ಎಸ್‌ಲ್ಲಿ ಪಾಲ್ಗೊಂಡ ವಿದ್ಯಾರ್ಥಿಗಳನ್ನು ಆಯ್ದುಕೊಂಡು ಅವರಿಗೆ ಸಮೀಕ್ಷೆಯ ತರಬೇತಿ ನೀಡುವ ಯೋಜನೆ ಸಿದ್ದಗೊಳ್ಳುತ್ತಿದ್ದು ಕೆಲವೆ ದಿನಗಳಲ್ಲಿ ಜಾರಿಯಾಗಲಿದೆ. ಸಮೀಕ್ಷೆಗೆ ಬೇಕಾದ ದಾಖಲಾತಿಗಳನ್ನು ಸಾರ್ವಜನಿಕರು ಸಿದ್ದಪಡಿಸುವಂತೆ ಮಾಡುವ ಕೆಲಸವನ್ನು ಶಿಬಿರಾರ್ಥಿಗಳು ಮಾಡಬೇಕಿದೆ ಎಂದರು. ಪ್ರಾಚಾರ್ಯರಾದ ಎಸ್.ಆರ್ ಮೂಗನೂರಮಠ ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಎನ್.ಎಸ್.ಎಸ್ ಘಟಕಾಧಿಕಾರಿಗಳಾದ ಡಾ.ಎಂ.ಎಚ್ ವಡ್ಡರ, ಡಾ.ವೀರುಪಾಕ್ಷಿ ಎನ್.ಬಿ, ಪ್ರಾಧ್ಯಾಪಕರುಗಳಾದ ಡಾ.ಕೆ.ವಿ ಮಠ, ಡಾ.ಎಲ್.ಎಸ್ ಚವಡಿ, ಎಸ್.ವಿ ಕಟ್ಟಿ, ನಟರಾಜ ಇಂಗಳಗಿ, ಶ್ರೇಯಾ ಜೋರಾಪೂರ ಮತ್ತು ಶಿಬಿರಾರ್ಥಿಗಳಿಗೆ ಟೀಶರ್ಟ್ ಕೊಡುಗೆ ನೀಡಿದ ಆನಂದ ಕೊಟ್ಟಗಿ, ನಾಗೇಶ ನಾಯಕ, ಕಿರಣ ಬಾಗೇವಾಡಿ, ಪ್ರಶಾಂತ ರಾಠೋಡ, ಕಿರಣ ನಾಯಕ ಸೇರಿದಂತೆ ಇತರರು ಇದ್ದರು.

# ಗ್ರಂಥಾಲಯಗಳ ಸದುಪಯೋಗ ಪಡೆಸಿಕೊಳ್ಳಿ

**ಬೆಳಗಾವಿ:** ಗ್ರಾಮೀಣ ಭಾಗದ ಓದುಗರ ಆಶಾಕಿರಣವಾದ ಗ್ರಾ.ಪಂ ಗ್ರಂಥಾಲಯಗಳಲ್ಲಿ ವಿಶೇಷ ಚೇತನರಿಗೆ ಸಮಗ್ರ ಓದುವ ಸಾಧನಗಳನ್ನು ಕಲ್ಪಿಸಿದ್ದು, ಅದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಜಿ.ಪಂ ಉಪಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ ಸಂಪನ್ಮೂಲ ಕೇಂದ್ರದಲ್ಲಿ ನಡೆದ ಗ್ರಂಥಾಲಯ ಮೇಲ್ವಿಚಾರಕರು ಹಾಗೂ ಎಮ್ ಆರ್ ಡಬ್ಲ್ಯು ಸಂಯೋಜಕರಿಗೆ ಹಮ್ಮಿಕೊಂಡಿದ್ದ "ದರ್ಶಿನಿ" ತರಬೇತಿ ಸಮಾರಂಭಕ್ಕೆ ಚಾಲನೆ ನೀಡಿ ಮಾತನಾಡಿ, ಜಿಲ್ಲಾ ಮಟ್ಟದಲ್ಲಿ ಆಯ್ದು ತಾಲೂಕಿನ ಗ್ರಂಥಪಾಲಕರಿಗೆ ವಿಕಲಚೇತರಿಗೆ ಕುರಿತು ತರಬೇತಿ ನೀಡಲಾಗುತ್ತಿದೆ. ಆಯಾ ಗ್ರಾಪಂ ಗ್ರಂಥಾಲಯ ವ್ಯಾಪ್ತಿಯಲ್ಲಿ ಇರುವ ಅಂಗವಿಕಲ ಚೇತನರಿಗೆ ದರ್ಶಿನಿ ತರಬೇತಿಯಲ್ಲಿ ಪಡೆದ ಮಾಹಿತಿಯನ್ನು ನೀಡುವ ಮೂಲಕ ಗ್ರಂಥಾಲಯ ದಲ್ಲಿ ವಿಶೇಷ ಚೇತನರಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು.

ಈ ಸಂದರ್ಭದಲ್ಲಿ ವಿಶೇಷ ಚೇತನ ಇಲಾಖೆಯ ಜಿಲ್ಲಾ ಮುಖ್ಯ ಕಲ್ಯಾಣಾಧಿಕಾರಿ ನಾಮದೇವ ಬಿಲಕರ, ತರಬೇತಿಯ ಸಂಪನ್ಮೂಲ ವ್ಯಕ್ತಿ ಬಾಳಪ್ಪ ಬಜಂತ್ರಿ, ಬಸಪ್ಪ ಆಚಾರ್ಯ, ಮಂಜುಳಾ ಹೊನಕೋಟಿ, ಸೋನು ಮುತ್ತನಾಳ, ತಾಪಂ ಅಧಿಕಾರಿ ವಿಶ್ವನಾಥ ಮೋರೆ ಸೇರಿದಂತೆ ಗ್ರಂಥಾಲಯ ಮೇಲ್ವಿಚಾರಕರು, ಎಮ್ ಆರ್ ಡಬ್ಲ್ಯೂ ಅಧಿಕಾರಿಗಳು ಉಪಸ್ಥಿತರಿದ್ದರು.





**ನಗರಸಭೆ ಕಾರ್ಯಾಲಯ ಗೋಕಾಕ**
**ಸಂಗೊಳ್ಳಿ ರಾಯಣ್ಣ ವೃತ್ತ ಗೋಕಾಕ-591307 ಜಿಲ್ಲೆ:ಬೆಳಗಾವಿ**
**ರಾಜ್ಯ:ಕರ್ನಾಟಕ ಪೋ.ನಂ:08332-225003**
WebSite:www.gokakcity.mrc.gov.in E-Mail:ka.gokak.cmc.@gmail.com

ನಂ.ನಸಗೋ/ಆವಿ/ಟೆಂಡರ/2025-26/ ದಿನಾಂಕ: 08-09-2025

**ಮರುಟೆಂಡರ ಪ್ರಕಟಣೆ**
**(through karnataka public procurement portal)**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆದ್ಯಾದೇಶ 1999-2000 ರ ಸ್ಟ್ಯಾಂಡರ್ಡ ಟೆಂಡರ ಡಾಕ್ಯುಮೆಂಟ್ ನಿಯಮದನ್ವಯ ಸ್ವಚ್ಛ ಭಾರತ್ ಮಿಷನ್ (ನಗರ) 2.0 ಅಡಿಯಲ್ಲಿ Information Education and Communication and Behavioural change (IEC & BC) ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು karnataka public procurement portal ನಲ್ಲಿ ಮರು ಟೆಂಡರನ್ನು ಅಹ್ವಾನಿಸಲಾಗಿದೆ. ವಿವರ ಈ ಕೆಳಕಂಡಂತಿರುತ್ತದೆ.

Sl No:1:Name of the work:Supply of IEC Materials Under SBM IEC Programme, Grant Description:SBM 2.0, Amount (In Lakhs.):3.52, EMD (in Rs):8800.00 , Tender No:DMA/2025-26/IND4623/CALL-3

1)ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ: 22-09-2025 ಸಾಯಂಕಾಲ 05:30 ರ ವರೆಗೆ. 2)ಟೆಂಡರ ತೆರೆಯುವ ದಿನಾಂಕ: 24-09-2025 ಬೆಳಿಗ್ಗೆ 11:00 ಗಂಟೆಗೆ.

ಹೆಚ್ಚಿನ ಮಾಹಿತಿಯನ್ನು http://kppp.karnataka.gov.in ರಲ್ಲಿ ಪಡೆಯಬಹುದಾಗಿದೆ.

ಸಹಿ/-ಪೌರಾಯುಕ್ತರು,
ನಗರಸಭೆ, ಗೋಕಾಕ.

DIPR/BGM/RO-NO-975/KSMCA/2025-26


BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :183, Postal Reg No. PMG/KA/NK/BM/135/25-27 / POST AT Vantamury Colony Post Office